**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರಿಸುವ ಬಗ್ಗೆ:-**

**ವಿಷಯ:**

ದಿನಾಂಕ:11.07.2023 ವಿಜಯ ತರಂಗ ದಿನ ಪತ್ರಿಕೆಯಲ್ಲಿ ಪ್ರಕಟವಾಗಿರುವ ವರದಿಯನ್ನು ಉಲ್ಲೇಖಿಸುತ್ತೇನೆ.

- ಗದಗ ಜಿಲ್ಲೆಯ ಮಾತ್ರವಲ್ಲದೇ ಸಾಕಷ್ಟು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ ಶೌಚಾಲಯಗಳಿಲ್ಲದೇ ಹಾಗೂ ಶುದ್ಧ ಕುಡಿಯುವ ನೀರಿನ ಸೌಲಭ್ಯವಿಲ್ಲದೇ ಮಕ್ಕಳು ಸಾಂಕ್ರಾಮಿಕ ಖಾಯಿಲೆಗೆ ತುತ್ತಾಗುತ್ತಿದ್ದಾರೆ. ಇದರಿಂದ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಮಕ್ಕಳು ದಾಖಲಾಗುತ್ತಿಲ್ಲ.
- ಹಲವು ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶೌಚಾಲಯಗಳು ಇಲ್ಲ, ಶೌಚಾಲಯಗಳಿರುವ ಶಾಲೆಗಳಲ್ಲಿ ಅವುಗಳ ನಿರ್ವಹಣೆ ಅತ್ಯಂತ ಕೆಟ್ಟದಾಗಿದ್ದು, ಕಾಲಿಡಲು ಸಾಧ್ಯವಾಗದಷ್ಟರ ಮಟ್ಟಿಗೆ ಹಾಳಾಗಿವೆ.
- ಕೆಲವು ಶೌಚಾಲಯಗಳಿಗೆ ನೀರಿನ ವ್ಯವಸ್ಥೆಯೇ ಇಲ್ಲವಾದರಿಂದ ಅವುಗಳ ಬಳಕೆಯೇ ಆಗುತ್ತಿಲ್ಲ ಈ ಎಲ್ಲಾ ಕಾರಣಗಳಿಂದ ಜಿಲ್ಲೆಯ ಅನೇಕ ಶಾಲೆಗಳ ಮಕ್ಕಳು ಈಗಲೂ ಮಲ, ಮೂತ್ರ ವಿಸರ್ಜನೆಗೆ ಬಯಲನ್ನೇ ಆಶ್ರಯಿಸಬೇಕಾದ ಪರಿಸ್ಥಿತಿ ಇದೆ.
- ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಎಲ್ಲಾ ಶಾಲೆಗಳಲ್ಲೂ ಶೌಚಾಲಯ ಕಡ್ಡಾಯವಾಗಿ ಇರಲೇಬೇಕು. ಆದರೆ ಅವುಗಳ ನಿರ್ವಹಣೆ ಸಾಧ್ಯವಾಗುತ್ತಿಲ್ಲ. ಸಾರ್ವಜನಿಕರ ಕಿಡಿಗೇಡಿತನ ಒಂದು ಕಡೆಯಾದರೆ, ಇನ್ನುಳಿದ ಕಡೆಗಳಲ್ಲಿ ಮಕ್ಕಳು ಬಳಸುವ ಶೌಚಾಲಯಗಳನ್ನು ಸ್ವಚ್ಛಗೊಳಿಸುವವರು ಯಾರು? ಎಂಬ ಪರಿಸ್ಥಿತಿ ಇದೆ.
- ಎಲ್ಲ ಹಳ್ಳಿಗಳಲ್ಲೂ ಶೌಚಾಲಯ ಸ್ವಚ್ಛಗೊಳಿಸುವವರು ಸಿಗುವುದಿಲ್ಲ. ಸಿಕ್ಕರೂ ಅವರಿಗೆ ತಿಂಗಳಿಗಿಷ್ಟು ಅಂತ ಹಣ ಕೊಡಲು ಅನುದಾನ ಇಲ್ಲ. ಮಕ್ಕಳಿಂದ ಶೌಚಾಲಯ ಸ್ವಚ್ಛಗೊಳಿಸುವುದಕ್ಕೆ ಆಗುವುದಿಲ್ಲ. ಉಳಿದವರು ಶಿಕ್ಷಕರು ಮಾತ್ರ.
- ಆದ ಕಾರಣ ಈ ಕೆಲಸಕ್ಕೆ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಿ ಸ್ಥಳೀಯ ಎಸ್.ಡಿ.ಎಂ.ಸಿ ಸಮಿತಿಯೊಂದಿಗೆ ಸಭೆ ನಡೆಸುವಂತೆ ಸಲಹೆ ನೀಡಿದ್ದರೂ ಆದರೂ ಪರಿಸ್ಥಿತಿ ಸುಧಾರಿಸಿಲ್ಲ. ವಿದ್ಯಾರ್ಥಿಗಳ ಕಲಿಕೆಗೆ ಪೂರಕವಾದ ವಾತಾವರಣ ನಿರ್ಮಿಸುವುದು ಸರ್ಕಾರದ ಜವಾಬ್ದಾರಿ ಅದರಂತೆ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಕ್ಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗೆ ಆದ್ಯತೆ ನೀಡಬೇಕು, ಇಲಾಖೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಈ ಮೂಲಕ ಸರ್ಕಾರವನ್ನು ಒತ್ತಾಯ ಮಾಡುತ್ತೇನೆ.

**ಉತ್ತರ :**

ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರವು ಗದಗ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿನ ಶಾಲೆಗಳಿಗೆ ಈ ಕೆಳಕಂಡ ಯೋಜನೆಗಳನ್ನು ಕೈಗೆತ್ತಿಕೊಂಡಿದೆ.

**ಶೌಚಾಲಯ ನಿರ್ಮಾಣದ ಬಗ್ಗೆ:-**

1. ಗದಗ ಜಿಲ್ಲೆಯಲ್ಲಿ ಎಲ್ಲಾ ಶಾಲೆಗಳಲ್ಲೂ ಶೌಚಾಲಯಗಳ ವ್ಯವಸ್ಥೆ ಇರುತ್ತದೆ.
2. 2020-21ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ, ಆಟದ ಮೈದಾನ, ಆವರಣ ಗೋಡೆ, ಅಡುಗೆ ಕೋಣೆ, ಮಳೆ ನೀರು ಕೊಯ್ಲು ಯೋಜನೆ, ಪೌಷ್ಠಿಕ ತೋಟ ನಿರ್ಮಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ.2920.99 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.
3. 2021-22ನೇ ಸಾಲಿನಲ್ಲಿ ರಾಜ್ಯವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ 3500.00 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. ರೂ.3500.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
4. 2022-23ನೇ ಸಾಲಿನಲ್ಲಿ ರಾಜ್ಯವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ ರೂ.23450.00 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. ರೂ.3500.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
5. ಇಲಾಖೆಯ ಸ್ಯಾಟ್ಸ್ ತಂತ್ರಾಂಶದಲ್ಲಿ ದಾಖಲಾದಂತೆ ರಾಜ್ಯದಲ್ಲಿರುವ ಒಟ್ಟು 42,223 ಶಾಲೆಗಳಲ್ಲಿ 42191 ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಹೊಂದಿದೆ.

- 2020-21 ರಿಂದ 2022-23ನೇ ಸಾಲಿನಲ್ಲಿ ನರೇಗಾ ಒಗ್ಗೂಡಿಸುವಿಕೆ ಮೂಲಕ ರಾಜ್ಯವಲಯ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣಕ್ಕಾಗಿ ಈ ಕೆಳಕಂಡಂತೆ ಅನುದಾನ ಮಂಜೂರಾಗಿರುತ್ತದೆ.

| ಕ್ರ ಸಂ | ವರ್ಷ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | 2020-21 | 2920.00 |
| 2 | 2021-22 | 3500.00 |
| 3 | 2022-23 | 23450.00 |
| ಒಟ್ಟು | | **29870.00** |

**ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆ:-**

- ಕಳೆದ 3 ವರ್ಷಗಳಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗೆ ಈ ಕೆಳಕಂಡಂತೆ ಮುಖ್ಯೋಪಾಧ್ಯಾಯರ/ಎಸ್.ಡಿ.ಎಂ.ಸಿ ಜಂಟಿ ಖಾತೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

**2020-21**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 5400/- | 1122.93 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 6790/- | 1527.07 |
| ಸರ್ಕಾರಿ ಪ್ರೌಢ ಶಾಲೆಗಳು | 7400/- | 349.80 |
| **ಒಟ್ಟು** | -- | **2999.80** |

**2021-22**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 4650/- | 967.00 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 5400/- | 1214.00 |
| ಸರ್ಕಾರಿ ಪ್ರೌಢ ಶಾಲೆಗಳು | 6750/- | 319.00 |
| **ಒಟ್ಟು** | --- | 2500.00 |

**2022-23**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 6350/- | 1317.43 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 8000/- | 1752.48 |
| ಸರ್ಕಾರಿ ಪ್ರೌಢ ಶಾಲೆಗಳು | 9000/- | 425.61 |
| **ಒಟ್ಟು** | --- | 3495.52 |

1. ಗದಗ ಜಿಲ್ಲೆಯಲ್ಲಿ ಎಲ್ಲಾ ಶಾಲೆಗಳಲ್ಲೂ ಕುಡಿಯುವ ನೀರಿನ ವ್ಯವಸ್ಥೆ ಇರುತ್ತದೆ.
2. ಇಲಾಖೆಯ ಸ್ಯಾಟ್ಸ್ ತಂತ್ರಾಂಶದಲ್ಲಿ ದಾಖಲಾದಂತೆ ರಾಜ್ಯದಲ್ಲಿರುವ ಒಟ್ಟು 42,223 ಶಾಲೆಗಳಲ್ಲಿ 42,220 ಶಾಲೆಗಳು ಕುಡಿಯುವ ನೀರಿನ ವ್ಯವಸ್ಥೆ ಹೊಂದಿದೆ. ಇನ್ನುಳಿದಂತೆ 3 ಶಾಲೆಗಳು ಸದರಿ ವ್ಯವಸ್ಥೆ ಹೊಂದಿರುವುದಿಲ್ಲ ಆದ್ದರಿಂದ ಬೇರೆ ಕಡೆಯಿಂದ ಕುಡಿಯುವ ನೀರು ಪೂರೈಸಲಾಗುತ್ತಿದೆ.
3. ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ರಾಜ್ಯದ 42,012 ಶಾಲೆಗಳಿಗೆ ಕುಡಿಯುವ ನೀರನ್ನು ಕೊಳಾಯಿ ಮೂಲಕ ಸರಬರಾಜು ಮಾಡಲಾಗುತ್ತಿದೆ.
4. ಹೊಸದಾಗಿ ಕಟ್ಟಡ ನಿರ್ಮಾಣ ಮಾಡುವಾಗ ಶಾಲಾ ಕಟ್ಟಡಗಳ ನಿರ್ಮಾಣದ ಜೊತೆಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುತ್ತಿದೆ.

2023–24ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಗನುಗುಣವಾಗಿ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗಾಗಿ ಕನಿಷ್ಠ ರೂ.20000/– ಹಾಗೂ ಗರಿಷ್ಠ ರೂ.45000/– ರಂತೆ ಒಟ್ಟು ರೂ.120.33 ಕೋಟಿ ರೂಗಳ ಅನುದಾನ ಮಂಜೂರಾಗಿರುತ್ತದೆ.

ಪ್ರಸ್ತುತ ಹೊಸದಾಗಿ ಕಟ್ಟಡ ನಿರ್ಮಾಣ ಮಾಡುವಾಗ ಶಾಲಾ ಕಟ್ಟಡಗಳ ನಿರ್ಮಾಣದ ಜೊತೆಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುತ್ತಿದೆ.

ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಗದಗ ಜಿಲ್ಲೆಯನ್ನು ಒಳಗೊಂಡಂತೆ ಹಂತಹಂತವಾಗಿ ರಾಜ್ಯದಾದ್ಯಂತ ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಿದೆ.

**ಸಂಖ್ಯೆ : ಇಪಿ 136 ಯೋಸಕ 2023**

(ಎಸ್.ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**